**ದಕ್ಷಿಣಕನ್ನಡ ಸಹಕಾರಿ ಹಾಲು ಉತ್ಪಾದಕರಒಕ್ಕೂಟ ನಿಯಮಿತ.,**
**ಮಂಗಳೂರು ಡೈರಿಆವರಣ, ಕುಲಶೇಖರ, ಮಂಗಳೂರು –575 005**
**ದೂರವಾಣಿ ಸಂಖ್ಯೆ: (0824) 2231515, 2230986 ಫ್ಯಾಕ್ಸ್ :2230029**
**Email : mddkmul@gmail.com**

**ನಂ:ದಕಹಾಒ:ಆಡಳಿತ: 7970:2019–20** **ದಿನಾಂಕ: 13–01–2020**

# :ಬ್ಯಾಕ್‌ಲಾಗ್ ನೇಮಕಾತಿ ಪ್ರಕಟಣೆ:

ದಕ್ಷಿಣಕನ್ನಡ ಸಹಕಾರಿ ಹಾಲು ಉತ್ಪಾದಕರ ಒಕ್ಕೂಟವು ದಕ್ಷಿಣಕನ್ನಡ ಮತ್ತು ಉಡುಪಿ ಜಿಲ್ಲೆಗಳ ಗ್ರಾಮೀಣ ಪ್ರದೇಶದಿಂದ ಹಾಲನ್ನು ಸಂಗ್ರಹಿಸಿ, ಸಂಸ್ಕರಣೆ/ ವಿವಿಧ ಉತ್ಪನ್ನಗಳ ತಯಾರಿಕೆ ಮಾಡಿ ಉತ್ತಮಗುಣಮಟ್ಟದ ಪಾಶ್ಚರೀಕರಿಸಿದ **'ನಂದಿನಿ'** ಹಾಲು ಮತ್ತು ಹಾಲಿನ ಉತ್ಪನ್ನಗಳನ್ನು ಗ್ರಾಹಕರಿಗೆ ಒದಗಿಸುವ ಸಹಕಾರಿ ಸಂಸ್ಥೆ ಯಾಗಿರುತ್ತದೆ. ಒಕ್ಕೂಟದ ಕಾರ್ಯಾಚರಣೆಯನ್ನು ಬಲಪಡಿಸಲು **ಈ ಕೆಳಗೆ ನಮೂದಿಸಿದ ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಯನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಪರಿಶಿಷ್ಟ ಜಾತಿಯ ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.**

1. **ಸಹಾಯಕ ವ್ಯವಸ್ಥಾಪಕರು(ಎ.ಹೆಚ್./ಎ.ಐ.) / Assistant Manager (AH/AI),**
   **ವೇತನಶ್ರೇಣಿ: ರೂ.52650–97100–ಒಂದು ಹುದ್ದೆ**

| | ಇತರೆ |
|---|---|
| ಪರಿಶಿಷ್ಟ ಜಾತಿ | 1 |

**ವಿದ್ಯಾರ್ಹತೆ:** ಪಶು ವೈದ್ಯಕೀಯ ವಿಜ್ಞಾನದಲ್ಲಿ **B.V.Sc. ಅಥವಾ B.V.Sc. & A.H** ಪದವೀಧರರಾಗಿರಬೇಕು.

2. **ಸಾಮಾನ್ಯ ಷರತ್ತುಗಳು:**

**ಪದವಿ** ಎಂದರೆಅಭ್ಯರ್ಥಿಯು 10+2 ರ ವಿದ್ಯಾಭ್ಯಾಸದ ನಂತರ ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತ ವಾಗಿರುವ ಯಾವುದೇ ಅಂಗೀಕೃತ ವಿಶ್ವವಿದ್ಯಾನಿಲಯದಿಂದ ನಿಯತವಾಗಿ ಪಡೆದ **ಕನಿಷ್ಟ ಐದು ವರ್ಷಗಳ ಅವಧಿಯ ಸಾಂಪ್ರದಾಯಿಕ ಪದವಿ (10+2+5).**

ಕನ್ನಡ ಭಾಷಾಜ್ಞಾನ (ಓದುವುದು ಮತ್ತು ಬರೆಯುವುದು) ಕಡ್ಡಾಯವಾಗಿರುತ್ತದೆ.

ಅಭ್ಯರ್ಥಿಗಳು ಅವಶ್ಯವಿರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ದಿನಾಂಕದೊಳಗೆ ನೇಮಕಾತಿ ಪ್ರಕಟಣೆಯಕೊನೆಯಲ್ಲಿ ನೀಡಲಾಗಿರುವ ನಮೂನೆಗಳಲ್ಲಿಯೇ ಪಡೆದು ಸಲ್ಲಿಸಬೇಕು.

ಮೂಲವೇತನದೊಂದಿಗೆ ಒಕ್ಕೂಟದ ಸೇವಾ ನಿಯಮಗಳಲ್ಲಿ ಕಾಲಕಾಲಕ್ಕೆ ಲಭ್ಯವಿರುವ ತುಟ್ಟಿಭತ್ಯೆ, ಮನೆ ಬಾಡಿಗೆ ಭತ್ಯೆ ಮತ್ತು ಇತರ ಭತ್ಯೆಗಳನ್ನು ಪಾವತಿಸಲಾಗುವುದು. ಭವಿಷ್ಯನಿಧಿ/ ಗ್ರಾಚ್ಯುಟಿ ಇತ್ಯಾದಿ ಶಾಸನಬದ್ಧ ಸೌಲಭ್ಯಗಳನ್ನು ನೀಡಲಾಗುವುದು.

ಸಹಾಯಕ ವ್ಯವಸ್ಥಾಪಕರು (ಎ.ಹೆಚ್./ಎ.ಐ) ಹುದ್ದೆಗಳಿಗೆ ನೇಮಕಗೊಳ್ಳುವ ಅಭ್ಯರ್ಥಿಗಳು ಗ್ರಾಮೀಣ ಪ್ರದೇಶದಲ್ಲಿ ವ್ಯಾಪಕ ಪ್ರವಾಸವನ್ನು ಕೈಗೊಳ್ಳುವುದು ಕಡ್ಡಾಯವಾಗಿರುತ್ತದೆ.

**2. ವಯೋಮಿತಿ:**

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದಂದು ಕನಿಷ್ಠ ವಯೋಮಿತಿ – 18 ವರ್ಷಗಳು ಮತ್ತುಗರಿಷ್ಠ ವಯೋಮಿತಿ: 40 ವರ್ಷಗಳು. **ಅಂಗವಿಕಲರಿಗೆ ಮತ್ತು ವಿಧವೆಯರಿಗೆ** ವಯೋಮಿತಿಯಲ್ಲಿ **ಗರಿಷ್ಠ 10 ವರ್ಷಗಳ ಸಡಿಲಿಕೆ** ಇರುತ್ತದೆ. ವಯೋಮಿತಿ ಸಡಿಲಿಕೆಯ ವಿನಾಯಿತಿ / ರಿಯಾಯಿತಿ ಸೌಲಭ್ಯ ಪಡೆಯಲಿಚ್ಛಿಸುವವರು ಈ ಬಗ್ಗೆ ಅಗತ್ಯ ಪ್ರಮಾಣ ಪತ್ರ / ದಾಖಲೆ ಸಲ್ಲಿಸಬೇಕು. ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು ಭಾರತೀಯ ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಅಷ್ಟು ವರ್ಷಗಳು. ಅಭ್ಯರ್ಥಿಯು ನ್ಯಾಷನಲ್‌ಕೆಡೆಟ್‌ಕಾರ್ಪ್ಸ್‌ನಲ್ಲಿ ಪೂರ್ಣಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

**3. ಅರ್ಹತಾ ಷರತ್ತುಗಳು:**

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಅಭ್ಯರ್ಥಿಗಳು ಮಾನಸಿಕವಾಗಿ ಮತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಅತಂಕವನ್ನುಂಟು ಮಾಡುವ ಸಂಭವವಿರುವ ಯಾವುದೇ ದೈಹಿಕ ನೂನ್ಯತೆಯಿಂದ ಮುಕ್ತರಾಗಿರಬೇಕು.

ಇ) ದೈಹಿಕವಾಗಿ ಅನರ್ಹರಾಗಿದ್ದರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಒಕ್ಕೂಟವು ಕಾಯ್ದಿರಿಸಿಕೊಂಡಿದೆ.

**4. ಆಯ್ಕೆ ವಿಧಾನ :**

ಬ್ಯಾಕ್‌ಲಾಗ್ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಯಾವುದೇ ಶುಲ್ಕವನ್ನು ಪಾವತಿಸುವಂತಿಲ್ಲ. ಪರಿಶಿಷ್ಟ ಜಾತಿ –ಇತರೆ ಬ್ಯಾಕ್‌ಲಾಗ್ ಹುದ್ದೆಯನ್ನು ಕರ್ನಾಟಕರಾಜ್ಯ ನಾಗರಿಕ ಸೇವೆಗಳು (ಪರಿಶಿಷ್ಟ ಜಾತಿ ಮತ್ತು (ಪರಿಶಿಷ್ಟ ಪಂಗಡಕ್ಕೆ ಸೇರಿದ ವ್ಯಕ್ತಿಗಳಿಗೆ ಮೀಸಲಿರಿಸಿದ ತುಂಬದೇಇರುವ ಸ್ಥಾನಗಳು) (ವಿಶೇಷ ನೇಮಕಾತಿ) ನಿಯಮಗಳು 2001 ಮತ್ತು ದಿನಾಂಕ 01–06–2002 ರ ಪ್ರಕಟಣೆಯಲ್ಲಿ ತಿದ್ದುಪಡಿಯಾದ ನಿಯಮಗಳ ಅವಕಾಶಗಳ ರೀತ್ಯಾ ಅರ್ಹತಾ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಗಳಿಸಿದ ಒಟ್ಟು ಅಂಕಗಳ ಶೇಕಡವಾರನ್ನು ಆಧರಿಸಿ 18 ವರ್ಷದಿಂದ 28 ವರ್ಷ ವಯೋಮಿತಿಯುಳ್ಳ ಅಭ್ಯರ್ಥಿಗಳ ಒಂದು ಜ್ಯೇಷ್ಠತಾ ಪಟ್ಟಿಯನ್ನು ಹಾಗೂ 29 ವರ್ಷದಿಂದ 40 ವರ್ಷ ವಯೋಮಿತಿಯುಳ್ಳ ಅಭ್ಯರ್ಥಿಗಳ ಇನ್ನೊಂದು ಜ್ಯೇಷ್ಠತಾ ಪಟ್ಟಿಯನ್ನು ಮಾಡಲಾಗುವುದು. 29 ವರ್ಷದಿಂದ 40 ವರ್ಷ ವಯೋಮಿತಿಯುಳ್ಳ ಅಭ್ಯರ್ಥಿಗಳ ಜ್ಯೇಷ್ಠತಾ ಪಟ್ಟಿಯಲ್ಲಿರುವವರಿಗೆ ಮೊದಲ ಆದ್ಯತೆ ನೀಡಲಾಗುವುದು. ಅಭ್ಯರ್ಥಿಗಳು ಅರ್ಜಿಯಲ್ಲಿ ಅರ್ಹತಾ ಪರೀಕ್ಷೆಯಲ್ಲಿ ಗಳಿಸಿದ ಒಟ್ಟು ಶೇಕಡವಾರು ಅಂಕ / ಗ್ರೇಡ್ ಪಾಯಿಂಟ್‌ಗಳನ್ನು ಸ್ಪಷ್ಟವಾಗಿ ನಮೂದಿಸತಕ್ಕದ್ದು.

**5. ಪ್ರಮುಖ ಸೂಚನೆಗಳು**

**i. ಜಾತಿ ಮೀಸಲಾತಿ ಪ್ರಮಾಣಪತ್ರಗಳು**

ಜಾತಿ ಮೀಸಲಾತಿ ಕೋರಬಯಸುವ –ಪರಿಶಿಷ್ಟ ಜಾತಿಗೆ ಸೇರಿದ ಬಗ್ಗೆ ನಮೂನೆ 'ಡಿ' ಯಲ್ಲಿ ಜಾತಿ ಪ್ರಮಾಣ ಪತ್ರ ಸಲ್ಲಿಸುವುದು.

**ii. ಕಡ್ಡಾಯವಾಗಿ ಹಾಜರುಪಡಿಸಬೇಕಾದ ಪ್ರಮಾಣಪತ್ರಗಳು**

ವಿದ್ಯಾರ್ಹತೆಗೆ ಸಂಬಂಧಿಸದ ಎಲ್ಲಾ ವರ್ಷಗಳ/ ಸೆಮಿಸ್ಟರ್‌ಗಳ ಅಂಕಪಟ್ಟಿಗಳು ಮತ್ತು ಪ್ರಮಾಣಪತ್ರ ಹಾಗೂ ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ ಅಥವಾತತ್ಸಮಾನ ಪರೀಕ್ಷೆಯ ಪ್ರಮಾಣಪತ್ರ ಅಥವಾ ವರ್ಗಾವಣೆ ಪ್ರಮಾಣಪತ್ರ ಅಥವಾ ಜನ್ಮ ದಿನಾಂಕವನ್ನುತೋರಿಸುವ ಸಂಚಿತದಾಖಲೆಯ ಉದ್ಧೃತ ಭಾಗ

(extract of cumulative record) ಕಡ್ಡಾಯವಾಗಿ ಸಲ್ಲಿಸತಕ್ಕದ್ದು. ಇಲ್ಲದಿದ್ದಲ್ಲಿ ಅರ್ಜಿಯನ್ನು ಪರಿಗಣಿಸಲಾಗುದಿಲ್ಲ. ವಿವಿಧ ಮೀಸಲಾತಿಗಳನ್ನು ಕೋರಿದಲ್ಲಿ ಮೀಸಲಾತಿ ಪ್ರಮಾಣಪತ್ರಗಳನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು. ಮೀಸಲಾತಿಗೆ ಸಂಬಂಧಿಸಿದಂತೆ ಸಲ್ಲಿಸಬೇಕಾದ ಪ್ರಮಾಣಪತ್ರಗಳನ್ನು ಅಭ್ಯರ್ಥಿಗಳು ಸಲ್ಲಿಸದಿದ್ದಲ್ಲಿ ಅಂತಹವರಿಗೆ ಮೀಸಲಾತಿ ಸೌಲಭ್ಯವನ್ನು ನೀಡಲಾಗುವುದಿಲ್ಲ.

**iii. ಪರೀಕ್ಷಾರ್ಥ ಅವಧಿ:**

ಆಯ್ಕೆಗೊಂಡ ಅಭ್ಯರ್ಥಿಗಳನ್ನು ಪ್ರಾರಂಭದಲ್ಲಿ ಎರಡು ವರ್ಷಗಳ ಪರೀಕ್ಷಾರ್ಥ ಅವಧಿಗೆ ನೇಮಕಾತಿ ಮಾಡ ಲಾಗುವುದು. ಅವಶ್ಯವಿದ್ದಲ್ಲಿ ಪರೀಕ್ಷಾರ್ಥ ಅವಧಿಯನ್ನು ವಿಸ್ತರಿಸಲಾಗುವುದು. ಪರೀಕ್ಷಾರ್ಥ ಅವಧಿಯಲ್ಲಿ ಅಭ್ಯರ್ಥಿಗಳ ಸೇವೆ ತೃಪ್ತಿಕರವಾಗಿದ್ದಲ್ಲಿ ಮಾತ್ರ ಸೇವೆಯನ್ನು ಖಾಯಂಗೊಳಿಸಲಾಗುವುದು.

**iv. ದುರ್ನಡತೆ:**

ಒಬ್ಬಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಹೊಂದಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಪರೀಕ್ಷಾಕೊಠಡಿಯಲ್ಲಿ ದುರ್ವರ್ತಿಸುತ್ತಿರು ವನೆಂಬ ಬಗ್ಗೆ ತಪ್ಪಿತಸ್ಥನೆಂದು ಕಂಡುಬಂದಲ್ಲಿ ಹಾಗೂ ಒಕ್ಕೂಟದಿಂದ ನೀಡಲಾದಯಾವುದೇ ಸೂಚನೆಗಳನ್ನು ಉಲ್ಲಂಘಿಸುತ್ತಿರುವನೆಂದು ಅಥವಾ ಅವನು ನೇಮಕಾತಿಯ ಸಂಬಂಧದಲ್ಲಿಯಾವುದೇ ಇತರ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ ಒಕ್ಕೂಟವು ನಡೆಸುವಯಾವುದೇ ಪರೀಕ್ಷೆಗೆ ಪ್ರವೇಶ ಪಡೆಯುವುದರಿಂದ ಅಥವಾ ಯಾವುದೇ ಹುದ್ದೆಯ ಆಯ್ಕೆಗೆ ಖಾಯಂ ಆಗಿ ಡಿಬಾರ್ ಮಾಡಲಾಗುವುದು.

**v. ಅರ್ಜಿ ಸಲ್ಲಿಸುವ ವಿಧಾನ :**

www.dkmul.comನಲ್ಲಿ ನೀಡಿರುವ ನಿಗದಿತ ಅರ್ಜಿ ನಮೂನೆಯಲ್ಲಿ ಕನ್ನಡ ಅಥವಾ ಆಂಗ್ಲ ಭಾಷೆಯಲ್ಲಿ ಸ್ಪಷ್ಟವಾಗಿ ಬರೆದು ಅಥವಾ ಬೆರಳಚ್ಚು/ ಕಂಪ್ಯೂಟರ್ ಮುದ್ರಣ ಮಾಡಿಸಿ ಅಗತ್ಯವಿರುವ ಎಲ್ಲಾ ದಾಖಲೆಗಳ ಪ್ರತಿಗಳನ್ನು ಸ್ವತ: ದೃಢೀಕರಿಸಿ (self attested) ಅರ್ಜಿಯೊಂದಿಗೆ ಕಡ್ಡಾಯವಾಗಿ ಲಗತ್ತಿಸಿ "ವ್ಯವಸ್ಥಾಪಕ ನಿರ್ದೇಶಕರು, ದಕ್ಷಿಣಕನ್ನಡ ಸಹಕಾರಿ ಹಾಲು ಉತ್ಪಾದಕರ ಒಕ್ಕೂಟ ನಿಯಮಿತ, ಮಂಗಳೂರು ಡೇರಿ ಆವರಣ, ಕುಲಶೇಖರ, ಮಂಗಳೂರು – 575 005" ವಿಳಾಸಕ್ಕೆ ದಿನಾಂಕ 13–02–2020ರಂದು ಸಂಜೆ 5.30 ಘಂಟೆಯೊಳಗೆ ಅಥವಾ ಅದಕ್ಕೂ ಮುಂಚಿತವಾಗಿ ತಲುಪುವಂತೆ ಅಂಚೆ : ಕೊರಿಯರ್ ಮೂಲಕ ಅಥವಾ ಖುದ್ದಾಗಿ ಕಳುಹಿಸತಕ್ಕದ್ದು. ಲಕೋಟೆಯ ಮೇಲೆ ಅರ್ಜಿ ಸಲ್ಲಿಸುವ ಹುದ್ದೆಯ ಹೆಸರನ್ನು ನಮೂದಿಸಬೇಕು. ಸಂಪೂರ್ಣ ಮಾಹಿತಿ ಒಳಗೊಂಡಿರದ ಹಾಗೂ ಅಗತ್ಯ ಪ್ರಮಾಣ ಪತ್ರಗಳು/ ಭಾವಚಿತ್ರ / ಸಹಿ ಮಾಡದೇಇರುವ ಅರ್ಜಿಗಳನ್ನು ಮತ್ತು ಕೊನೆಯ ದಿನಾಂಕ 13–02–2020ರಂದು ಸಂಜೆ 5.30 ಘಂಟೆಯ ನಂತರ ಬರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಸಹಿ:

**ವ್ಯವಸ್ಥಾಪಕ ನಿರ್ದೇಶಕರು.**